# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಉತ್ತರ ಕನ್ನಡ ಜಿಲ್ಲೆಯ ಕುಮುಟ ತಾಲ್ಲೂಕಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಖಾಸಗಿ ಕಟ್ಟಡಕ್ಕೆ ಆಡಳಿತಾತ್ಮಕ ಮಂಜೂರಾತಿ ನೀಡುವ ಕುರಿತು.

ಓದಲಾಗಿದೆ:- ಪತ್ರ ಸಂಖ್ಯೆ:ಕವಶಿಸಸ/ಶಿಕ್ಷಣ/ಸಿಆರ್/26/2012-13, ದಿನಾಂಕ:13.09.2013.

*****

ಪ್ರಸ್ತಾವನೆ:

ಮೇಲೆ ಓದಲಾದ ಪತ್ರದಲ್ಲಿ 2006-07ನೇ ಸಾಲಿನಲ್ಲಿ ಪ್ರಾರಂಭವಾದ ಮೊರಾರ್ಜಿ ದೇಸಾಯಿ ವಸತಿ ಶಾಲೆಯು, ಕುಮುಟ, ಕೃಷಿ ಇಲಾಖೆಯ ಕಟ್ಟಡದಲ್ಲಿ ವಸತಿ ನಿಲಯ ನಡೆಯುತ್ತಿದ್ದು, ಸದರಿ ಕಟ್ಟಡವನ್ನು ಕೃಷಿ ವಿಶ್ವವಿದ್ಯಾನಿಲಯ, ಧಾರವಾಡಕ್ಕೆ ಹಸ್ತಾಂತರ ಮಾಡಿರುವುದರಿಂದ ಕುಮುಟ ತಾಲ್ಲೂಕಿನ ಶ್ರೀ ರಾಜೇಶ್ ದೇವಿದಾಸ್ ನಾಯ್ಕ, ವಿವೇಕನಗರ, ಕುಮುಟ ರವರಿಗೆ ಸೇರಿದ ಬಾಡಿಗೆ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ. ಸದರಿ ಬಾಡಿಗೆ ಕಟ್ಟಡಕ್ಕೆ ಲೋಕೋಪಯೋಗಿ ಇಲಾಖೆಯವರು ಮಾಹೆಯಾನ ರೂ.85,000/-(ಎಂಬತ್ತೈದು ಸಾವಿರದ ರೂಪಾಯಿಗಳು ಮಾತ್ರ)ಗಳಿಗೆ ಮಾಸಿಕ ಬಾಡಿಗೆಯನ್ನು ನಿಗಧಿಪಡಿಸಿದ್ದು, ದಿನಾಂಕ:01-06-2013ರಿಂದ ಪಾವತಿಸಲು ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು, ಇವರು ಆಡಳಿತಾತ್ಮಕ ಅನುಮೋದನೆ ನೀಡುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

## ಸರ್ಕಾರಿ ಆದೇಶ ಸಂಖ್ಯೆ:ಸಕಇ 207 ಮೋದೇಶಾ 2013 ಬೆಂಗಳೂರು, ದಿನಾಂಕ:18-11-2013,

ಶ್ರೀ ರಾಜೇಶ್ ದೇವಿದಾಸ್ ನಾಯ್ಕ, ವಿವೇಕನಗರ, ಕುಮುಟ ಇವರ ಮಾಲೀಕತ್ವದ ಬಾಡಿಗೆ ಕಟ್ಟಡದಲ್ಲಿ ದಿನಾಂಕ:01-06-2013ರಿಂದ ನಡೆಸಲಾಗುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಕುಮುಟ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ, ಈ ವಸತಿ ಶಾಲೆಯ ಕಟ್ಟಡಕ್ಕೆ ಲೋಕೋಪಯೋಗಿ ಇಲಾಖೆಯವರು ಮಾಹೆಯಾನ ನಿಗಧಿಪಡಿಸಿದ ರೂ.85,000/-(ಎಂಬತ್ತೈದು ಸಾವಿರದ ರೂಪಾಯಿಗಳು ಮಾತ್ರ)ಗಳಂತೆ ಬಾಡಿಗೆಯನ್ನು ದಿನಾಂಕ:01-06-2013ರಿಂದ ಅನ್ವಯಿಸುವಂತೆ ಹಾಗೂ TDS ಆದಾಯ ತೆರಿಗೆಯನ್ನು ನಿಯಮಾನುಸಾರ ಕೇಂದ್ರ ಸರ್ಕಾರದ ಲೆಕ್ಕಕ್ಕೆ ಜಮೆಗೊಳಿಸುವ ಷರತ್ತಿನೊಂದಿಗೆ ಕಟ್ಟಡದ ಮಾಲೀಕರಿಗೆ ಬಾಡಿಗೆ ಪಾವತಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

...2

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 1 ಟಿಎಫ್‌ಪಿ 1996 ದಿನಾಂಕ:10-07-1996ರಲ್ಲಿ ಸರ್ಕಾರದ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ವಿ.ರತ್ನಮ್ಮ) 19/11
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ,

1. ಮಹಾಲೇಖಪಾಲರು,(ಎ ಮತ್ತು ಇ)(ಲೆಕ್ಕ ಪರಿಶೋಧನೆ-1) (ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು
2. ಜಿಲ್ಲಾಧಿಕಾರಿಗಳು, ಕುಮುಟ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ,
3. ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳು, ಕುಮುಟ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ,
4. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
5. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಜಿಲ್ಲಾ ಅಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆ, ಕುಮುಟ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ,
7. ಖಜಾನಾಧಿಕಾರಿಗಳು, ಕುಮುಟ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ,
8. ವಿಸ್ತಾರ್ಣಾಧಿಕಾರಿಗಳು, ಸಮಾಜ ಕಲ್ಯಾಣಾಧಿಕಾರಿ, ಕುಮುಟ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ,
9. ಶ್ರೀ ರಾಜೇಶ್ ದೇವಿದಾಸ್ ನಾಯ್ಕ, ವಿವೇಕನಗರ, ಕುಮುಟ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ,
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.